## ಕರ್ನಾಟಕ ಸರ್ಕಾರದ ನಡವಳಿಗಳು

## ಜಲ ಸಂಪನ್ಮೂಲ ಇಲಾಖೆ

ವಿಷಯ:- ಬಳ್ಳಾರಿ ಜಿಲ್ಲೆಯ ಹೊಸಪೇಟೆ ತಾಲ್ಲೂಕಿನ ಪಾಪಿನಾಯಕನಹಳ್ಳಿ ಮತ್ತು ಸುತ್ತುಮುತ್ತಲಿನ ಗಣಿಗಾರಿಕೆಯಿಂದ ಭಾಧಿತ ಗ್ರಾಮಗಳಿಗೆ ತುಂಗಭದ್ರಾ ನದಿಯಿಂದ ನೀರನ್ನೆತ್ತಿ 18 ಕೆರೆ ಹಾಗೂ 04 ಚೆಕ್‌ಡ್ಯಾಂಗಳನ್ನು ತುಂಬಿಸಿ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ಸಮಗ್ರ ಯೋಜನೆಯ ಒಟ್ಟಾರೆ ರೂ.243.35 ಕೋಟಿಗಳ ಯೋಜನೆಯ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:- 1.ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿನಿ/ನೀಕೇವ/ಪಾ.ಹಳ್ಳಿ ಏನೀಯೋ/48/2018-19/3948, ದಿನಾಂಕ:02.11.2019.

---***---

**ಪ್ರಸ್ತಾವನೆ:**

ಬಳ್ಳಾರಿ ಜಿಲ್ಲೆಯ ಹೊಸಪೇಟೆ ತಾಲ್ಲೂಕಿನ ಪಾಪಿನಾಯಕನಹಳ್ಳಿ ಮತ್ತು ಸುತ್ತುಮುತ್ತಲಿನ ಗಣಿಗಾರಿಕೆಯಿಂದ ಭಾಧಿತ ಗ್ರಾಮಗಳಿಗೆ ತುಂಗಭದ್ರಾ ನದಿಯಿಂದ ನೀರನ್ನೆತ್ತಿ 18 ಕೆರೆ ಹಾಗೂ 04 ಚೆಕ್‌ಡ್ಯಾಂಗಳನ್ನು ತುಂಬಿಸಿ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ಸಮಗ್ರ ಯೋಜನೆಯ ಒಟ್ಟಾರೆ ರೂ.243.35 ಕೋಟಿಗಳ ಯೋಜನೆಯ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ದಿನಾಂಕ 02.11.2019 ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ಕೋರಿರುತ್ತಾರೆ.

ಸದರಿ ಯೋಜನೆಯಡಿ ಬಳ್ಳಾರಿ ಜಿಲ್ಲೆಯ ಹೊಸಪೇಟೆ ತಾಲ್ಲೂಕಿನ ಪಾಪಿನಾಯಕನಹಳ್ಳಿ ಬಳಿ ಜಾಕ್‌ವೆಲ್ ಮತ್ತು ಪಂಪ್‌ಹೌಸನ್ನು ನಿರ್ಮಿಸಿ ಸುಮಾರು 16.80 ಕಿ.ಮೀ. ರೈಸಿಂಗ್ ಮೇನ್ ಮುಖಾಂತರ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ಬಳ್ಳಾರಿ ಜಿಲ್ಲೆಯ ಹೊಸಪೇಟೆ ತಾಲ್ಲೂಕಿನ ಪಾಪಿನಾಯಕನಹಳ್ಳಿ ಸುತ್ತುಮುತ್ತಲಿನ ಗಣಿಗಾರಿಕೆಯಿಂದ ಭಾಧಿತ ಗ್ರಾಮಗಳ ಸುತ್ತಮುತ್ತಲಿನ ಕೆರೆಗಳಿಗೆ ನೀರು ತುಂಬಿಸಲು ಉದ್ದೇಶಿಸಲಾಗಿರುತ್ತದೆ. ಇದರಿಂದ ಜನ-ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಅಂತರ್ಜಲ ಅಭಿವೃದ್ಧಿ ಪಡಿಸಿ, ಆ ಭಾಗದ ಪ್ರದೇಶಕ್ಕೆ ನೀರಿನ ಬವಣೆಯನ್ನು ನೀಗಿಸಿದಂತಾಗುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ವರದಿಸಿರುತ್ತಾರೆ.

ಮುಂದುವರೆದು, ಯೋಜನೆಯ ವಿವರವಾದ ಯೋಜನಾ ವರದಿಯನ್ನು ದಿನಾಂಕ:01.10.2019 ರಂದು ಜರುಗಿದ ಕರ್ನಾಟಕ ನೀರಾವರಿ ನಿಗಮದ ಅಂದಾಜು ಪರಿಶೀಲನಾ ಸಮಿತಿಯ 60ನೇ ಸಭೆಯಲ್ಲಿ ಸದರಿ ಯೋಜನೆಗೆ ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆ ಪಡೆದು ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಲು ಶಿಫಾರಸ್ಸು ನೀಡಿರುತ್ತದೆ. ಅದರಂತೆ, . ದಿನಾಂಕ:24.10.2019 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 86ನೇ ಸಭೆಯಲ್ಲಿ ಸದರಿ ಯೋಜನೆಯ ರೂ.243.35 ಕೋಟಿಗಳ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಮಂಡಳಿಯು ಅನುಮೋದನೆ ನೀಡಿರುತ್ತದೆ.

...2

Scanned by CamScanner

ಈ ಹಿನ್ನೆಲೆಯಲ್ಲಿ, ಸದರಿ ಪ್ರಸ್ತಾವನೆಗೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ಆಡಳಿತಾತ್ಮಕ ಅನುಮೋದನೆ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಜಸಂಇ 55 ಎಂಟಿಪಿ 2019, ಬೆಂಗಳೂರು,**
**ದಿನಾಂಕ: 07.11.2019**

ಬಳ್ಳಾರಿ ಜಿಲ್ಲೆಯ ಹೊಸಪೇಟೆ ತಾಲ್ಲೂಕಿನ ಪಾಪಿನಾಯಕನಹಳ್ಳಿ ಮತ್ತು ಸುತ್ತುಮುತ್ತಲಿನ ಗ್ರಾಮಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಹಾಗೂ ಕೆರೆ ತುಂಬಿಸುವ ರೂ.243.35 ಕೋಟಿಗಳ (ಇನ್ನೂರ ನಲವತ್ತೂರು ಕೋಟಿ ಮೂವತ್ತೈದು ಲಕ್ಷ ರೂಪಾಯಿಗಳು ಮಾತ್ರ) ಅಂದಾಜು ವೆಚ್ಚದ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಿ ಹಂತ ಹಂತವಾಗಿ ಅನುಷ್ಠಾನಗೊಳಿಸುವ ಷರತ್ತಿಗೊಳಪಟ್ಟು ಸದ್ಯಕ್ಕೆ ಆಯವ್ಯಯ ಘೋಷಣೆಯಂತೆ ಪ್ರಸಕ್ತ ಸಾಲಿಗೆ ರೂ.75.00 ಕೋಟಿಗಳಿಗೆ (ಎಪ್ಪತ್ತೈದು ಕೋಟಿ ರೂಪಾಯಿಗಳು ಮಾತ್ರ) ವೆಚ್ಚ ಭರಿಸಲು ಅನುಮೋದನೆ ನೀಡಿದೆ.

ಈ ಆದೇಶವನ್ನು ಕರ್ನಾಟಕ ಸರ್ಕಾರದ (ವ್ಯವಹಾರಗಳ ನಿರ್ವಹಣೆ) ನಿಯಮಗಳು, 1977ರ ಭಾಗ-1ರ ನಿಯಮ-17ರ ಉಪ ನಿಯಮ (2)ರ ಪರಂತುಕದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

7/11
(ಶ್ರೀಹರಿ ಎಸ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1)
ಜಲಸಂಪನ್ಮೂಲ ಇಲಾಖೆ

**ಪ್ರತಿಯನ್ನು:**

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ) ಕರ್ನಾಟಕ ಬೆಂಗಳೂರು 01.
4. ಸರ್ಕಾರದ ಉಪಕಾರ್ಯದರ್ಶಿಗಳು (ಸಚಿವ ಸಂಪುಟ).
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ನೀರಾವರಿ ಕೇಂದ್ರ ವಲಯ, ಮುನಿರಾಬಾದ್.
8. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ) ವಿಧಾನ ಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned by CamScanner